# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಬಳ್ಳಾರಿ ಜಿಲ್ಲೆ, ಹಗರಿಬೊಮ್ಮನಹಳ್ಳಿ ತಾಲ್ಲೂಕಿನ ಉಪನಾಯಕನಹಳ್ಳಿ ಮತ್ತು ಇತರೆ 20 ಗ್ರಾಮಗಳ ಬಹುಗ್ರಾಮ ಕುಡಿಯುವ ನೀರು ಸರಬರಾಜು ಯೋಜನೆಯ 5 ವರ್ಷಗಳ ಕಾರ್ಯಾಚರಣೆ ಮತ್ತು ನಿರ್ವಹಣೆ (ಓ&ಎಂ) ಕಾಮಗಾರಿಗೆ ಆಡಳಿತಾತ್ಮಕ ಅನುಮೋದನೆ ನೀಡುವ ಕುರಿತು.

**ಓದಲಾಗಿದೆ:** ಮುಖ್ಯ ಇಂಜಿನಿಯರ್, RDWSD ರವರ ಕಡತ ಸಂ:ಗ್ರಾಕುನೀ&ನೈಇ/180/ಮು.ಇಂ/ತಾಂತ್ರಿಕ/2020.

----

**ಪೀಠಿಕೆ:**

ಬಳ್ಳಾರಿ ಜಿಲ್ಲೆ, ಹಗರಿಬೊಮ್ಮನಹಳ್ಳಿ ತಾಲ್ಲೂಕಿನ ಉಪನಾಯಕನಹಳ್ಳಿ ಮತ್ತು ಇತರೆ 20 ಗ್ರಾಮಗಳ ಬಹುಗ್ರಾಮ ಕುಡಿಯುವ ನೀರು ಸರಬರಾಜು ಯೋಜನೆಯ 5 ವರ್ಷಗಳ ಕಾರ್ಯಾಚರಣೆ ಮತ್ತು ನಿರ್ವಹಣೆ (ಓ&ಎಂ) ಕಾಮಗಾರಿಗೆ 2020-21ನೇ ಸಾಲಿನ ಕ್ರಿಯಾ ಯೋಜನೆಯಲ್ಲಿ ಅನುಮೋದನೆ ನೀಡಲಾಗಿದೆ.

ಈ ಯೋಜನೆಯ ಕಾಮಗಾರಿಯನ್ನು ಅನುಷ್ಠಾನಗೊಳಿಸಲು ಆಡಳಿತಾತ್ಮಕ ಅನುಮೋದನೆಯ ಅವಶ್ಯಕತೆ ಇರುವುದರಿಂದ ಆಡಳಿತಾತ್ಮಕ ಅನುಮೋದನೆ ನೀಡಲು ಪ್ರಸ್ತಾವನೆಯನ್ನು ಮುಖ್ಯ ಇಂಜಿನಿಯರ್, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆರವರು ಮೇಲೆ ಓದಲಾದ ಕಡತದಲ್ಲಿ ಕೋರಿರುತ್ತಾರೆ. ಹಾಗೂ ಚಾಲ್ತಿ ಪಾರದರ್ಶಕ ನೀತಿಯನ್ವಯ, ನಿಯಮಾನುಸಾರ ಬಳ್ಳಾರಿ ಜಿಲ್ಲಾ ಪಂಚಾಯತ್ ಹಾಗೂ ಮುಖ್ಯ ಇಂಜಿನಿಯರ್, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆರವರು ಮುಂದಿನ ಪ್ರಕ್ರಿಯೆಯನ್ನು ಅನುಸರಿಸಲನುವಾಗುವಂತೆ ಸದರಿ ಕಾಮಗಾರಿಗೆ **JJM(O&M)** ಕಾರ್ಯಕ್ರಮದಡಿ ಆಡಳಿತಾತ್ಮಕ ಅನುಮೋದನೆ ನೀಡಲು ನಿರ್ಧರಿಸಲಾಗಿದೆ. ಆದ್ದರಿಂದ ಈ ಆದೇಶ:-

**ಸರ್ಕಾರದ ಆದೇಶ ಸಂಖ್ಯೆ:ಗ್ರಾಕುನೀ&ನೈಇ 83 ಗ್ರಾನೀಸ(4) 2020 ಬೆಂಗಳೂರು, ದಿನಾಂಕ:27.11.2020.**

ಪೀಠಿಕೆಯಲ್ಲಿನ ವಾಸ್ತವಾಂಶಗಳ ಹಿನ್ನೆಲೆಯಲ್ಲಿ, ಬಳ್ಳಾರಿ ಜಿಲ್ಲೆ, ಹಗರಿಬೊಮ್ಮನಹಳ್ಳಿ ತಾಲ್ಲೂಕಿನ ಉಪನಾಯಕನಹಳ್ಳಿ ಮತ್ತು ಇತರೆ 20 ಗ್ರಾಮಗಳ ಬಹುಗ್ರಾಮ ಕುಡಿಯುವ ನೀರು ಸರಬರಾಜು ಯೋಜನೆಯ 5 ವರ್ಷಗಳ ಕಾರ್ಯಾಚರಣೆ ಮತ್ತು ನಿರ್ವಹಣೆ (ಓ&ಎಂ) ಕಾಮಗಾರಿಗೆ ಅಂದಾಜು ಮೊತ್ತ **ರೂ.451.00ಲಕ್ಷ (ನಾಲ್ಕು ನೂರ ಐವತ್ತೊಂದು ಲಕ್ಷ ರೂಪಾಯಿಗಳು ಮಾತ್ರ) ಗಳಿಗೆ JJM (O&M)** ಕಾರ್ಯಕ್ರಮದಡಿ ಅನುಮೋದನೆ ನೀಡಲು ಸರ್ಕಾರವು ಹರ್ಷಿಸುತ್ತದೆ.

2. **ಈ ಆದೇಶವು ಕೆಳಕಂಡ ಷರತ್ತುಗಳಿಗೆ ಒಳಪಟ್ಟಿರುತ್ತದೆ.**

(ಅ) ನಿರ್ವಹಣೆಯ ಗುತ್ತಿಗೆಯನ್ನು ವಹಿಸಲಾಗುವ ಸಂಸ್ಥೆಯೇ 5 ವರ್ಷಗಳ ಕಾಲ ಸದರಿ ಯೋಜನೆಯ ಸಂಪೂರ್ಣ ನಿರ್ವಹಣೆ ಮತ್ತು ಕಾರ್ಯಾಚರಣೆಯನ್ನು ನಿರ್ವಹಿಸತಕ್ಕದ್ದು.

(ಆ) ಈ ಆದೇಶದಡಿ ಅನುಮೋದನೆಯಾದ ಯೋಜನೆಗೆ ಅಂದಾಜು ಮೊತ್ತದ ವ್ಯಾಪ್ತಿಯೊಳಗೆ CE/RDWSD ದೃಢೀಕರಿಸಿದ ತಾಂತ್ರಿಕ ಅನುಮೋದನೆಯನ್ವಯ ಪ್ರಗತಿ ಸಾಧಿಸತಕ್ಕದ್ದು.

27/11/2020.

(ಇ) ಕಾಮಗಾರಿಯ ಪ್ರಾರಂಭದಿಂದ ಅಂತ್ಯದವರೆವಿಗೂ ಭೌತಿಕ ಹಾಗೂ ಆರ್ಥಿಕ ಪ್ರಗತಿಯ ವಿವರಗಳನ್ನು IMISನಲ್ಲಿ ದಾಖಲಿಸತಕ್ಕದ್ದು.

(ಈ) ಸರ್ಕಾರದ ನೀತಿಯನ್ವಯ ಮನೆ ಸಂಪರ್ಕ ಮತ್ತು ಸ್ಟ್ಯಾಂಡ್ ಪೋಸ್ಟ್‌ಗಳಿಗೆ ಕಲ್ಪಿಸಿರುವ ಸಂಪರ್ಕದನ್ವಯ ನಿರ್ವಹಣೆ ವೆಚ್ಚಕ್ಕನುಗುಣವಾಗಿ ಅಗತ್ಯ ನೀರಿನ ಶುಲ್ಕ ಸಂಗ್ರಹಿಸತಕ್ಕದ್ದು ಹಾಗೂ ಮನೆ ಸಂಪರ್ಕಕ್ಕೆ ನೀರಿನ ಠೇವಣಿಯನ್ನು ಗ್ರಾಮ ಪಂಚಾಯತ್ ಠರಾವಿನನ್ವಯ ಸಂಗ್ರಹಿಸುವುದು.

(ಉ) ನಿರ್ವಹಣೆ ಮತ್ತು ಕಾರ್ಯಾಚರಣೆ ಕಾಮಗಾರಿಯ ವೆಚ್ಚವನ್ನು ಲೆಕ್ಕ ಶೀರ್ಷಿಕೆ:4215-01-102-2-01 ರಡಿಯಲ್ಲಿ ಭರಿಸತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

27/11/2020

ಸರ್ಕಾರದ ಉಪ ಕಾರ್ಯದರ್ಶಿ (ಆಡಳಿತ)(ಪ್ರ)
ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ

**ಪ್ರತಿಗಳು:**

1. ಮಹಾಲೇಖಪಾಲರು (ಲೆಕ್ಕಪತ್ರ –AG/A&E) ಕರ್ನಾಟಕ, ಬೆಂಗಳೂರು.
2. ಮಹಾಲೇಖಪಾಲರು (ಎಯು–I – G&SSA- AUDIT) ಕರ್ನಾಟಕ, ಬೆಂಗಳೂರು.
3. ಮಹಾಲೇಖಪಾಲರು (ಎಯು– II – E&RSA-) ಕರ್ನಾಟಕ, ಬೆಂಗಳೂರು.
4. ಅಧ್ಯಕ್ಷರು, ಜಿಲ್ಲಾ ಪಂಚಾಯತ್, ಬಳ್ಳಾರಿ
5. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಆರ್ಥಿಕ ಇಲಾಖೆ, ಇವರ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
6. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಗ್ರಾ.ಅ. ಮತ್ತು ಪಂ. ರಾಜ್ ಇಲಾಖೆ ಇವರ ಆಪ್ತ ಕಾರ್ಯದರ್ಶಿ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
7. ಆಯುಕ್ತರು, ಗ್ರಾ.ಕು.ನೀ.&.ನೈ. ಇಲಾಖೆ, ಬೆಂಗಳೂರು.
8. ಮುಖ್ಯ ಇಂಜಿನಿಯರ್, ಗ್ರಾ.ಕು.ನೀ.&.ನೈ. ಇಲಾಖೆ, ಬೆಂಗಳೂರು.ಇವರಿಗೆ ಮಾಹಿತಿ ಹಾಗೂ ಮುಂದಿನ ಸೂಕ್ತ ಕ್ರಮಕ್ಕಾಗಿ.
9. ನಿರ್ದೇಶಕರು, ಶ್ರೀ ಅಬ್ದುಲ್ ನಜೀರ್ ಸಾಬ್ ಗ್ರಾಮೀಣಾಭಿವೃದ್ಧಿ ರಾಜ್ಯ ಸಂಸ್ಥೆ, ಲಲಿತ್ ಮಹಲ್ ರಸ್ತೆ, ಮೈಸೂರು
10. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತ್, ಬಳ್ಳಾರಿ.
11. ಅಧೀಕ್ಷಕ ಅಭಿಯಂತರರು, ಗ್ರಾ.ಕು.ನೀ.&.ನೈ. ವೃತ್ತ ಕಛೇರಿ, ಕಲಬುರಗಿ
12. ಆಂತರಿಕ ಆರ್ಥಿಕ ಸಲಹೆಗಾರರು, ಗ್ರಾ.ಅ.ಮತ್ತು ಪಂ ರಾಜ್ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
13. ಮುಖ್ಯ ಸಂಪಾದಕರು ಮತ್ತು ಸಂಪರ್ಕಾಧಿಕಾರಿ "ಕರ್ನಾಟಕ ವಿಕಾಸ" ಗ್ರಾ.ಅ.ಪಂ.ರಾಜ್ ಇಲಾಖೆ, ಬೆಂಗಳೂರು.
14. ಮುಖ್ಯ ಲೆಕ್ಕಾಧಿಕಾರಿ, ಗ್ರಾ.ಕು.ನೀ.&ನೈ.ಇ., ಕಾವೇರಿ ಭವನ, ಬೆಂಗಳೂರು.
15. ಕಾರ್ಯಪಾಲಕ ಅಭಿಯಂತರರು, ಗ್ರಾ.ಕು.ನೀ.&.ನೈ. ವಿಭಾಗ, ಬಳ್ಳಾರಿ.
16. ಶಾಖಾಧಿಕಾರಿ, ರವಾನೆ ಮತ್ತು ಸ್ವೀಕೃತಿ ಶಾಖೆ, ಗ್ರಾ.ಅ.&.ಪಂ.ರಾಜ್ ಇಲಾಖೆ (ವಾರದ ಗೆಜೆಟ್‌ನಲ್ಲಿ ಪ್ರಕಟಿಸಲು 5 ಪ್ರತಿಗಳು).
17. ರಾಜ್ಯ ಪತ್ರಾಗಾರ ಇಲಾಖೆ (ಬಿಡಿ ಪ್ರತಿ ಶಾಖೆ).
18. ಗ್ರಾ.ಅ ಮತ್ತು ಪಂ.ರಾಜ್ ಇಲಾಖೆಯ ಮಾಹಿತಿ ಕೇಂದ್ರ (10 ಪ್ರತಿಗಳು).
19. ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು.